ಚುಕ್ಕೆ ಗುರುತಿಲ್ಲದ ಪ್ರಶ್ನೆ : (184)217
ಸದಸ್ಯರ ಹೆಸರು : ಶ್ರೀ ಎನ್.ವೈ.ಗೋಪಾಲಕೃಷ್ಣ (ಮೊಳಕಾಲ್ಮೂರು)
ಉತ್ತರಿಸುವ ಸಚಿವರು : (ಶ್ರೀ ಆರ್.ಅಶೋಕ್) ಮಾನ್ಯ ಸಾರಿಗೆ ಸಚಿವರು.

ಅ) ಮೊಳಕಾಲ್ಮೂರು ಕ್ಷೇತ್ರದಲ್ಲಿ ಸಾರಿಗೆ ವ್ಯವಸ್ಥೆ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಬಂದಿರುತ್ತದೆ.

ಆ) ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಮೊಳಕಾಲ್ಮೂರು ಮತ ಕ್ಷೇತ್ರದಲ್ಲಿನ ಹಳ್ಳಿಗಾಡಿನ ಪ್ರದೇಶಗಳಲ್ಲಿ ಖಾಸಗಿ ಮೋಟಾರು ವಾಹನಗಳನ್ನು ಓಡಿಸಲು ಅನುಮತಿ ನೀಡಿದೆಯೇ?

ಇಲ್ಲ.

ಇ) ನೀಡಿದ್ದಲ್ಲಿ, ಅನುಮತಿ ಪಡೆದು ಓಡಿಸುತ್ತಿರುವ ಖಾಸಗಿ ಮೋಟಾರು ವಾಹನಗಳೆಷ್ಟು?

ಪ್ರಾದೇಶಿಕ ಸಾರಿಗೆ ಪ್ರಾಧಿಕಾರ, ಚಿತ್ರದುರ್ಗ ಮತ್ತು ದಾವಣಗೆರೆ ಇವರು ಕ್ರಮವಾಗಿ 35 ಮತ್ತು 4 ಖಾಸಗಿ ಮಜಲುವಾಹನಗಳ ಆಚರಣೆಗೆ ರಹದಾರಿಗಳನ್ನು ನೀಡಿರುತ್ತಾರೆ.

ಈ) ಅನುಮತಿ ಇಲ್ಲದೆ ಓಡಿಸುತ್ತಿರುವ ವಾಹನಗಳೆಷ್ಟು?

ಯಾವುದು ಇರುವುದಿಲ್ಲ.

ಉ) ಹೆಚ್ಚಿನ ಸಾರಿಗೆ ಸೌಲಭ್ಯವನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಖಾಸಗಿ ಪ್ರವರ್ತಕರು ಮಜಲು ವಾಹನ ರಹದಾರಿಗಾಗಿ ಅರ್ಜಿ ಸಲ್ಲಿಸಿದಲ್ಲಿ ಪ್ರಾಧಿಕಾರದ ಮುಂದೆ ಮಂಡಿಸಿ ನಿಯಮಾನುಸಾರ ರಹದಾರಿ ನೀಡಲು ಕ್ರಮ ಜರುಗಿಸಲಾಗುವುದು. ಇದಲ್ಲದೆ ಕೆ.ಎಸ್.ಆರ್.ಟಿ.ಸಿ.ಯವರಿಗೆ ಹೆಚ್ಚಿನ ಸಾರಿಗೆ ವ್ಯವಸ್ಥೆಯನ್ನು ಒದಗಿಸಲು ತಿಳಿಸಲಾಗಿದೆ.

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (186) 219
2. ಸದಸ್ಯರ ಹೆಸರು : ಶ್ರೀ ಗೋಪಾಲಕೃಷ್ಣ ಎನ್.ವೈ. (ಮೊಳಕಾಲೂರು)
3. ಉತ್ತರಿಸುವ ಸಚಿವರು : ಶ್ರೀ ಡಾ: ವಿ.ಎಸ್.ಆಚಾರ್ಯ (ಮಾನ್ಯ ಗೃಹ ಸಚಿವರು)

ಅ. ಗಡಿ ಭಾಗದ ಚೆಕ್‌ಪೋಸ್ಟ್‌ಗಳನ್ನು ಪೊಲೀಸ್ ಸಿಬ್ಬಂದಿ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಗಡಿ ಭಾಗದ ಚೆಕ್ ಪೋಸ್ಟ್‌ಗಳಲ್ಲಿ ಸಿಬ್ಬಂದಿ ಕೊರತೆ ಇರುವುದಿಲ್ಲ.

ಆ. ಮೊಳಕಾಲ್ಮೂರು ಕ್ಷೇತ್ರದಲ್ಲಿ ನಕ್ಸಲೀಯರ ಚಟುವಟಿಕೆಯು ಹೆಚ್ಚುತ್ತಿರುವುದರಿಂದ ಇದನ್ನು ನಿಯಂತ್ರಿಸಲು ಹೆಚ್ಚಿನ ಪೊಲೀಸ್ ಸಿಬ್ಬಂದಿಯನ್ನು ನೇಮಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ?

ಆಂಧ್ರ ಪ್ರದೇಶದ ಗಡಿ ಭಾಗದಲ್ಲಿ ರಾಜ್ಯದ ಪೊಲೀಸರ ಚಟುವಟಿಕೆ ಹೆಚ್ಚಿಸುವ ನಿಟ್ಟಿನಲ್ಲಿ ಪರಶುರಾಂಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿರುವ ಜಾಜೂರು ಉಪಠಾಣೆಯನ್ನು ಪೂರ್ಣ ಪ್ರಮಾಣದ ಪೊಲೀಸ್ ಠಾಣೆಯನ್ನಾಗಿ ಮೇಲ್ದರ್ಜೆಗೇರಿಸುವ ಹಾಗೂ ಹೆಚ್ಚುವರಿ ಪೊಲೀಸ್ ಸಿಬ್ಬಂದಿಯನ್ನು ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಇ. ಪೊಲೀಸ್ ಸಿಬ್ಬಂದಿ ವರ್ಗದವರು ಪರಿಣಾಮಕಾರಿಯಾಗಿ ಕರ್ತವ್ಯವನ್ನು ನಿರ್ವಹಿಸಲು ಅನುವಾಗಲು ಜೀಪ್, ವೈರ್‌ಲೆಸ್ ಸಿಸ್ಟಂ ಹಾಗೂ ಇನ್ನಿತರ ಅತ್ಯಾಧುನಿಕ ಉಪಕರಣಗಳನ್ನು ಮತ್ತು ವಸತಿ ಸೌಲಭ್ಯವನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದೇ?

ರಾಜ್ಯದಲ್ಲಿನ ಎಲ್ಲಾ ಪೊಲೀಸ್ ಘಟಕಗಳಿಗೆ ಜೀಪು, ದ್ವಿಚಕ್ರ ವಾಹನಗಳನ್ನು ಒದಗಿಸಲಾಗಿದೆ. ನಕ್ಸಲ್ ಪೀಡಿತ ಜಿಲ್ಲೆಗಳಲ್ಲಿ ನಕ್ಸ್ಲ್ ಪೀಡಿತ ಠಾಣೆ ಹಾಗೂ ಗಡಿ ಭಾಗದ ಪೊಲೀಸ್ ಠಾಣೆಗಳಿಗೆ ಮೈನ್ ಪೊಟೆಕ್ಟಡ್ ವಾಹನಗಳನ್ನು ಒಳಗೊಂಡಂತೆ ಹೆಚ್ಚುವರಿ ವಾಹನಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ವೈರ್‌ಲೆಸ್ ಉಪಕರಣ ಹಾಗೂ ಸ್ಯಾಟ್‌ಲೇಟ್ ದೂರವಾಣಿ, ಆಧುನಿಕ ಉಪಕರಣಗಳಾದ ಗಣಕ ಯಂತ್ರಗಳು, ಬೆರಳಚ್ಚು ಯಂತ್ರಗಳು, ಫ್ಯಾಕ್ಸ್ ಯಂತ್ರಗಳು, ಎಮರ್ಜೆನ್ಸಿ ಲೈಟಿಂಗ್ ಸಿಸ್ಟಂ, ಜನರೇಟರ್‌ಗಳು, ಸೋಲಾರ್ ಪವರ್ ಫ್ಯಾಕ್ಸ್‌ಗಳು, ನೈಟ್ ವಿಷನ್ ಬೈನಾಕ್ಯುಲರ್ಸ್, ಡೋರ್ ಫ್ರೇಮ್ ಮೆಟಲ್ ಡಿಟೆಕ್ಟರ್‌ಗಳು, ಡಿಜಿಟಲ್/ವಿಡಿಯೋ ಕ್ಯಾಮರಾ ಇತ್ಯಾದಿಗಳನ್ನು ಒದಗಿಸಲಾಗಿದೆ.

ಮೊಳಕಾಲ್ಮೂರು ಕ್ಷೇತ್ರದ ಪೊಲೀಸ್ ಸಿಬ್ಬಂದಿ ವರ್ಗದವರು ಪರಿಣಾಮಕಾರಿಯಾಗಿ ಕರ್ತವ್ಯನಿರ್ವಹಿಸಲು ಅನುಕೂಲವಾಗುವಂತೆ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಈಗಾಗಲೇ ವಸತಿ ಗೃಹಗಳನ್ನು ಮಂಜೂರು ಮಾಡಲಾಗಿದೆ. ನಾಯಕನಹಟ್ಟಿ ಪೊಲೀಸ್ ಠಾಣೆಯ ಸಿಬ್ಬಂದಿ ವರ್ಗದವರಿಗೆ ತ್ವರಿತ ವಸತಿ ಯೋಜನೆ–3ರಡಿಯಲ್ಲಿ ವಸತಿ ಗೃಹಗಳನ್ನು ಆಧ್ಯತೆಯ ಮೇರೆಗೆ ಕಟ್ಟಿಸಿಕೊಡಲಾಗುವುದು.